ಶ್ರೀ ಕೆ.ಹೆಚ್. ಪಾಟೀಲ್ (ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

(ಅ), (ಆ) ಮತ್ತು (ಇ) ಈವರೆವಿಗೂ ಸ್ಥಳೀಯ ಅಧಿಕಾರಿಗಳು ಯಾವುದೇ ನಿರ್ದಿಷ್ಟ ಕ್ರಮವನ್ನು ಕೈಗೊಂಡಿರುವುದಿಲ್ಲ. ಗುಲ್ಬರ್ಗಾ ಜಿಲ್ಲಾ ಪರಿಷತ್ತು ಮುಖ್ಯ ಕಾರ್ಯದರ್ಶಿಗಳವರಿಗೆ ದುರುಪಯೋಗವಾದ ಹಣವನ್ನು ವಸೂಲು ಮಾಡಲು ಸಂಬಂಧಪಟ್ಟ ಸರ್ಕಾರಿ ನೌಕರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಮಾಡಲು ಹಾಗೂ ಶಿಸ್ತಿನ ಕ್ರಮವನ್ನು ನಿಯಮಗಳಿಗೆ ಅನುಸಾರವಾಗಿ ತೆಗೆದುಕೊಳ್ಳುವಂತೆ ಸೂಚನೆಗಳನ್ನು ನೀಡಲಾಗಿದೆ.

ಪ್ರವಾಸಿ ಸ್ಥಳಗಳ ಅಭಿವೃದ್ಧಿ

2065 - ಶ್ರೀಮತಿ ಮೋಟಮ್ಮ (ಮೂಡಿಗೆರೆ) : ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಈ ವರ್ಷವನ್ನು ಪ್ರವಾಸಿ ವರ್ಷವೆಂದು ಪರಿಗಣಿಸಿರುವುದು ಸರ್ಕಾರದ ಗಮನದಲ್ಲಿದೆಯೇ?

ಆ) ಹಾಗಿದ್ದಲ್ಲಿ, ಮೂಡಿಗೆರೆ ತಾಲ್ಲೂಕಿನ ಐತಿಹಾಸಿಕ ಸ್ಥಳಗಳಾದ ಅಂಗಡಿ (ಹೊಯ್ಸಳ ಮೂಲ ಸ್ಥಳ) ಬಲ್ಲಾಳರಾಯನ ದುರ್ಗಾ, ಈ ಸ್ಥಳಗಳನ್ನು ಪ್ರವಾಸಿ ಸ್ಥಳಗಳನ್ನಾಗಿ ಅಭಿವೃದ್ಧಿಪಡಿಸುವುದು ಸರ್ಕಾರದ ಮುಂದಿದೆಯೆ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು)

ಅ) ಹೌದು

ಆ) ಸದ್ಯಕ್ಕೆ ಅಂಥ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಜಿಲ್ಲಾ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ತೆಗೆದುಕೊಳ್ಳುವುದು

2045 - ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿರುವ ಎಲ್ಲಾ ಜಿಲ್ಲಾ ರಸ್ತೆಗಳನ್ನೂ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಬಗ್ಗೆ ಪ್ರಸ್ತಾಪವು ಸರ್ಕಾರದಲ್ಲಿ ಇದೆಯೆ?

ಆ) ಹಾಗಿದ್ದಲ್ಲಿ, ಪ್ರತಿಯೊಂದು ಜಿಲ್ಲೆಯಲ್ಲಿ ತೆಗೆದುಕೊಳ್ಳಲಾಗದ ರಸ್ತೆಗಳ ಉದ್ದವೆಷ್ಟು?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಜಿಲ್ಲಾ ಪರಿಷತ್ ವ್ಯಾಪ್ತಿಯಲ್ಲಿ ಬರುವ ಕೆಲವು ಇತರೆ ಜಿಲ್ಲಾ ರಸ್ತೆಗಳು ಹಾಗೂ ಹಳ್ಳಿ ದರ್ಜೆ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಪ್ರಸ್ತಾಪವು ಸರ್ಕಾರದಲ್ಲಿ ಇದೆ.

ಆ) ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿ ಬರುವ ಒಟ್ಟು ಸುಮಾರು 6000 ಕಿ.ಮೀ. ಉದ್ದದ ರಸ್ತೆಯನ್ನು ಅಂದರೆ ಪ್ರತಿ ಜಿಲ್ಲೆಗೆ ಸರಾಸರಿ 300 ಕಿ.ಮೀ.ನಷ್ಟು ರಸ್ತೆಯನ್ನು ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಪ್ರಸ್ತಾಪವಿದೆ.